ಆಲೂರಿನಲ್ಲಿರುವ ಬಸ್ ನಿಲ್ದಾಣ

೧೧೮೬. ಬಿ. ಶ್ರೀ ಬಿ. ಆರ್. ಗುರುದೇವ್ (ಸಕಲೇಶಪುರ).—ಮಾನ್ಯ ಸಾರಿಗೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಆಲೂರು ಪಟ್ಟಣದಲ್ಲಿರುವ ಬಸ್‌ಸ್ಟಾಂಡ್ ಸಹ ಬಹಳ ಕಿರಿದಾಗಿದ್ದು, ಬೇಕಾಗಿರುವ ಸೌಲಭ್ಯಗಳಿಲ್ಲದೆ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗಿರುವುದು ನಿಜವೆ ?

ಆ) ಹಾಗಿದ್ದಲ್ಲಿ, ಈ ಬಗ್ಗೆ ಕೈಗೊಂಡ ಕ್ರಮವೇನು?

ಶ್ರೀ ಕೆ. ಜೆ. ಜಾರ್ಜ್ (ಸಾರಿಗೆ ರಾಜ್ಯ ಸಚಿವರು).—

ಅ) ಹೌದು

ಆ) ಇಲ್ಲಿ ಆಧುನಿಕ ಬಸ್ ನಿಲ್ದಾಣ ನಿರ್ಮಿಸುವ ಪ್ರಸ್ತಾವನೆಯಿದೆ.

ಸಕಲೇಶಪುರ ಪಟ್ಟಣದಲ್ಲಿರುವ ಬಸ್ ಸ್ಟ್ಯಾಂಡ್

೧೧೮೬. ಎ ಶ್ರೀ ಬಿ. ಆರ್. ಗುರುದೇವ (ಸಕಲೇಶಪುರ) ಮಾನ್ಯ ಸಾರಿಗೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.—

ಅ) ಸಕಲೇಶಪುರ ಟೌನ್‌ನಲ್ಲಿರುವ ಬಸ್‌ಸ್ಟ್ಯಾಂಡ್ ರಾಷ್ಟ್ರೀಯ ಹೆದ್ದಾರಿಯ ಪಕ್ಕದಲ್ಲಿದ್ದು, ತುಂಬಾ ಕಿರಿದಾಗಿರುತ್ತದೆ ಹಾಗು ಹಾಲಿ ಇರುವ ಬಸ್‌ಸ್ಟ್ಯಾಂಡ್‌ನಲ್ಲಿ ಬೇಕಾಗಿರುವ ಸೌಲಭ್ಯಗಳಿಲ್ಲದೆ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ

ಆ) ಹಾಗಿದ್ದಲ್ಲಿ ಈ ತೊಂದರೆಯನ್ನು ನಿವಾರಿಸಲು ಕೈಗೊಂಡ ಕ್ರಮವೇನು?

ಶ್ರೀ ಕೆ. ಆರ್. ಜಾರ್ಜ್ (ಸಾರಿಗೆ ರಾಜ್ಯ ಸಚಿವರು).—

ಅ) ಬಂದಿದೆ.—

ಆ) ಆಧುನಿಕ ಬಸ್ ನಿಲ್ದಾಣವನ್ನು ನಿರ್ಮಿಸುವ ಆಲೋಚನೆಯಿದೆ.

ಆಲೂರು ಮತ್ತು ಸಕಲೇಶಪುರ ತಾಲ್ಲೂಕಿನ ಏತ ನೀರಾವರಿ ಯೋಜನೆಗಳು

೧೧೮೪. ಶ್ರೀ ಬಿ. ಆರ್. ಗುರುದೇವ್ (ಸಕಲೇಶಪುರ).—ಮಾನ್ಯ ಲೋಕೋಪಯೋಗಿ ಮತ್ತು ನೀರಾವರಿ ಮಂತ್ರಿಗಳ ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಸಕಲೇಶಪುರ ಮತ್ತು ಆಲೂರು ತಾಲ್ಲೂಕಿನಲ್ಲಿ ಎಷ್ಟು ಏತ ನೀರಾವರಿ ಯೋಜನೆಗಳಿವೆ?

ಆ) ಪುನಃ ಈ ತಾಲ್ಲೂಕುಗಳಿಗೆ ಏತ ನೀರಾವರಿ ಯೋಜನೆ ಮಂಜೂರು ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ ?

ಶ್ರೀ ಜಿ. ಪುಟ್ಟಸ್ವಾಮಿಗೌಡ (ಲೋಕೋಪಯೋಗಿ ಮತ್ತು ನೀರಾವರಿ ಸಚಿವರು)—

ಅ) ಸಕಲೇಶಪುರ ತಾಲ್ಲೂಕಿನಲ್ಲಿ ೧ ಮತ್ತು ಆಲೂರು ತಾಲ್ಲೂಕಿನಲ್ಲಿ ೭ ಏತ ನೀರಾವರಿ ಯೋಜನೆಗಳು ಇವೆ. ಅವುಗಳು ಈ ಕೆಳಕಂಡಂತಿವೆ.

ಕ್ರಮ ಸಂಖ್ಯೆ	ತಾಲ್ಲೂಕು	ಏತ ನೀರಾವರಿ ಯೋಜನೆಗಳು
೧.	ಸಕಲೇಶಪುರ	ಹೆಡಿಗೆ
೨.	ಆಲೂರು	೧ ಬಸವಾಪುರ ೨ ಬುಡನಹಳ್ಳಿ ೩ ದೊಡ್ಡಕನಗಲ್ ೪ ಕಿರುಗಾವಲು ೫ ಕರಿಗೌಡನಹಳ್ಳಿ ೬ ಮಂಚೇನಹಳ್ಳಿ ೭ ಸಿಂಗಾಪುರ